ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ: 15ನೇ ಜುಲೈ, 2019

ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದಿಂದ ಪರಿಶಿಷ್ಟಜಾತಿ/ಪಂಗಡದ ಕಾಲೋನಿಗಳಲ್ಲಿ ಹಾಳಾಗಿರುವ ಮೂಲಭೂತ ಸೌಲಭ್ಯಗಳಿಗೆ ಅನುದಾನ ನೀಡುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) -

7 (70) ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಸಾಕಷ್ಟು ಮೂಲಭೂತ ಸೌಲಭ್ಯಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಾಳಾಗಿರುವ ಈ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಬೇಕಾದ ಅಂದಾಜು ಅನುದಾನದ ಮೊತ್ತವೇನು ;

(ಇ) 2018-19ನೇ ಸಾಲಿನಲ್ಲಿ ಸದರಿ ಸೌಲಭ್ಯಗಳನ್ನು ಕಲ್ಪಿಸಲು ಬಿಡುಗಡೆಯಾಗಿರುವ ಅನುದಾನವೆಷ್ಟು ಹಾಗೂ ಕೈಗೊಂಡಿರುವ ಕಾಮಗಾರಿಗಳ ವಿವರಗಳೇನು ;

(ಈ) 2019-2020ನೇ ಸಾಲಿನಲ್ಲಿ ಈ ಸಂಬಂಧಿತ ಕಾಮಗಾರಿಗಳಿಗೆ ನಿಗದಿಯಾಗಿರುವ, ಬಿಡುಗಡೆಯಾಗಿರುವ, ಖರ್ಚಾಗಿರುವ ಅನುದಾನವೆಷ್ಟು ಹಾಗೂ ಕಾಮಗಾರಿಗಳು ಯಾವುವು ? (ಸಂಪೂರ್ಣ ವಿವರ ನೀಡುವುದು)